**ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ನೃಪತುಂಗ ರಸ್ತೆ, ಬೆಂಗಳೂರು.-1**

ಕ್ರಮ ಸಂಖ್ಯೆ:ಎಂ.ಸಿ.4ಕೇ.ಪಠ್ಯ.ಸು.ಹಿ./2014-15 ದಿನಾಂಕ:14.08.2014.

"ಜ್ಞಾಪನ"

ವಿಷಯ: ಅಲ್ಪಸಂಖ್ಯಾತರ ಶಾಲೆಗಳಲ್ಲಿ ಕೇಂದ್ರೀಯ ಪಠ್ಯಕ್ರಮ ಅನುಸರಿಸುತ್ತಿರುವ ಸಂಬಂಧ ನೀಡಲಾದ ಸುತ್ತೋಲೆಯನ್ನು ಹಿಂಪಡೆಯುವ ಬಗ್ಗೆ.

ಉಲ್ಲೇಖ:1)ಈ ನಿರ್ದೇಶನಾಲಯದ ಪತ್ರದ ಸಂಖ್ಯೆ:ಎಂ.ಸಿ.4.ಅಲ್ಪ.ಸಂ.ಸಂ.ಘೋ.ನಿಯಮ01/2013-14 ದಿನಾಂಕ:14.02.2014.

2)ಸರ್ಕಾರಿ ಆದೇಶದ ಸಂಖ್ಯೆ:ಇ.ಡಿ.02ಎಸ್,ಎಂ.ಸಿ. 2014 ದಿನಾಂಕ:07.03.2014

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದಲ್ಲಿನ ಅಲ್ಪಸಂಖ್ಯಾತ ಆಡಳಿತ ಮಂಡಳಿಯವರು, ಕೇಂದ್ರೀಯ ಪಠ್ಯಕ್ರಮ ಅನುಸರಿಸುತ್ತಿರುವ ಶಾಲೆಗಳಿಗೆ ಉಲ್ಲೇಖ(1)ರನ್ವಯ ಭಾಷಾ/ಮತೀಯ ಅಲ್ಪಸಂಖ್ಯಾತ ಶಾಲೆಗಳಿಗೆ ಘೋಷಣೆ ನೀಡುವ ಸಂಬಂಧ ಕರ್ನಾಟಕ ಶಿಕ್ಷಣ ಹಕ್ಕು ಕಾಯಿದೆ ಅಧಿನಿಯಮ-1983, ಅಧ್ಯಾಯ-1, ಸಾಮಾನ್ಯ ನಿಯಮ-1(3)(iii-a) ರನ್ವಯ ಹಾಗೂ ರಾಜ್ಯ ಸರ್ಕಾರದ ಮಾರ್ಗಸೂಚಿಗಳನ್ವಯ ಶಿಕ್ಷಣ ಇಲಾಖಾ ವ್ಯಾಪ್ತಿಗೆ ಬಾರದ ಪ್ರಯುಕ್ತ. ಈ ಮೇಲ್ಕಂಡ ಅಂಶಗಳನ್ನು ಗಮನಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿಯೆ ಸಂಬಂಧಿಸಿದ ಆಡಳಿತ ಮಂಡಳಿಯವರು ಭಾಷಾ/ಮತೀಯ ಅಲ್ಪಸಂಖ್ಯಾತ ಶಾಲೆಗಳೆಂದು ಘೋಷಣೆಯ ಕುರಿತು ನೀಡುವ ಪ್ರಸ್ತಾವನೆಗೆ ಹಿಂಬರಹ ನೀಡಲು ಸೂಚಿಸಿದೆ. ಎಂದು ಸುತ್ತೋಲೆಯನ್ನು ಹೊರಡಿಸಲಾಗಿತ್ತು.

ಉಲ್ಲೇಖ(2) ಸರ್ಕಾರಿ ಆದೇಶದ ನಿರ್ದೇಶನದಂತೆ ಮತ್ತು ಆರ್.ಟಿ.ಇ. ನಿಯಮದಂತೆ ಕೇಂದ್ರೀಯ ಪಠ್ಯಕ್ರಮ ಅನುಸರಿಸುತ್ತಿರುವ ಭಾಷಾ/ಮತೀಯ ಅಲ್ಪಸಂಖ್ಯಾತ ಶಾಲೆಗಳ ಘೋಷಣೆಯ ಸಂಬಂಧ ಹೊರಡಿಸಿದ್ದ ಉಲ್ಲೇಖ(1)ರ ಸುತ್ತೋಲೆಯನ್ನು ಹಿಂಪಡೆಯಲಾಗಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.

ಪ್ರತಿಯನ್ನು:

1)ಎಲ್ಲಾ ಉಪ ನಿರ್ದೇಶಕರುಗಳಿಗೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಮುಂದಿನ ಸೂಕ್ತ ಕ್ರಮಕ್ಕಾಗಿ,

2)ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಮುಂದಿನ ಸೂಕ್ತ ಕ್ರಮಕ್ಕಾಗಿ.

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ-02 ಎಸ್ಎಂಸಿ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:07/03/2014.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ,
ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ,
**ಬೆಂಗಳೂರು–560 001.**

**ಇವರಿಗೆ:**

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ,
**ಬೆಂಗಳೂರು–560 001.**

Minority

ಮಾನ್ಯರೆ,

**ವಿಷಯ:–** ರಾಜ್ಯದಲ್ಲಿ ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ಶಿಕ್ಷಣ ಸಂಸ್ಥೆಗಳು ನಡೆಸುತ್ತಿರುವ ಶಾಲೆಗಳನ್ನು ಭಾಷಾ / ಮತೀಯ ಅಲ್ಪಸಂಖ್ಯಾತ ಶಾಲೆಗಳೆಂದು ಘೋಷಿಸುವ ಬಗ್ಗೆ.

**ಉಲ್ಲೇಖ:–** ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪಸಂಖ್ಯಾತ ಭಾಷೆಗಳ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಂ.ಸಿ.4/ಕೇ.ಪ.ಶಾ.ಘೋ/96/2012–13 ದಿನಾಂಕ: 06/03/2013.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದ ಕಡೆ ಗಮನ ಸೆಳೆಯಲಾಗಿದೆ. ಸದರಿ ಪತ್ರದಲ್ಲಿ ರಾಜ್ಯದಲ್ಲಿ ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ಶಿಕ್ಷಣ ಸಂಸ್ಥೆಗಳು ನಡೆಸುತ್ತಿರುವ ಶಾಲೆಗಳನ್ನು ಭಾಷಾ / ಮತೀಯ ಅಲ್ಪಸಂಖ್ಯಾತ ಶಾಲೆಗಳೆಂದು ಘೋಷಿಸುವ ಬಗ್ಗೆ ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪಸಂಖ್ಯಾತ ಭಾಷೆಗಳ ನಿರ್ದೇಶನಾಲಯ, ಬೆಂಗಳೂರು ಇವರು ಹೊರಡಿಸಿರುವ ಪತ್ರವನ್ನು ಹಿಂಪಡೆಯುವಂತೆ ಈ ಮೂಲಕ ತಮ್ಮನ್ನು ಕೋರಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ,

(ಜಿ.ಆರ್.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಸಮಿತಿಗಳು).